ಅನುದಾನ ಲಭ್ಯತೆಯನ್ನು ಆಧರಿಸಿ, ಅಗತ್ಯತೆಗನುಗುಣವಾಗಿ ಉಳಿದ ಪದವಿ ಪೂರ್ವ ಕಾಲೇಜುಗಳಲ್ಲಿ ವಾಣಿಜ್ಯ ಸಂಯೋಜನೆಯನ್ನು ಪ್ರಾರಂಭಿಸುವ ಬಗ್ಗೆ ಕ್ರಮಕೈಗೊಳ್ಳಲಾಗುವುದು.

ಉಪನ್ಯಾಸಕರುಗಳನ್ನು ಮಾತೃ ಇಲಾಖೆಗೆ ಕಳುಹಿಸುವುದು

267 (563) ಶ್ರೀ ಪ್ರಕಾಶ್ ಹೆಚ್.ಎಸ್. (ಹಾಸನ):– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯದ ಪದವಿ ಪೂರ್ವ ಕಾಲೇಜು ಉಪನ್ಯಾಸಕರುಗಳು ಸಮಾಜ ಕಲ್ಯಾಣ ಇಲಾಖೆಯಲ್ಲಿ ನಿಯೋಜನೆ ಮೇಲೆ ಕಾರ್ಯನಿರ್ವಹಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಈ ಉಪನ್ಯಾಸಕರುಗಳನ್ನು ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಮಾತೃ ಇಲಾಖೆಗೆ ಬಿಡುಗಡೆಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

(ಅ) ಬಂದಿದೆ.

(ಆ) ಸರ್ವೋಚ್ಚ ನ್ಯಾಯಾಲಯದ ಆದೇಶದನ್ವಯ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರು ಹಾಗೂ ಪ್ರಾಥಮಿಕ ಶಾಲಾ ಮತ್ತು ಪ್ರೌಢ ಶಾಲಾ ಸಹಶಿಕ್ಷಕರನ್ನು ಬೋಧಕೇತರ ಕಾರ್ಯಗಳಿಗಾಗಿ ನಿಯೋಜಿಸಬಾರದೆಂದು ಸುತ್ತೋಲೆ ಸಂಖ್ಯೆ: ಇಡಿ 300 ಡಿಜಿಡಿ 2011 ದಿನಾಂಕ: 08–11–2011 ರಂದು ಹೊರಡಿಸಿದೆ. ಅದರಂತೆ, ಪದವಿ ಪೂರ್ವ ಶಿಕ್ಷಣ ಇಲಾಖೆಯಿಂದ ಅನ್ಯ ಇಲಾಖೆಗೆ ನಿಯೋಜನೆ/ಎರವಲು ಸೇವೆಯಲ್ಲಿರುವ ಉಪನ್ಯಾಸಕರುಗಳನ್ನು ಮಾತೃ ಇಲಾಖೆಗೆ ಹಿಂಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ.

219 (167) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) ಮಾನ್ಯ ಸಹಕಾರ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ರಾಜ್ಯ ಸರ್ಕಾರವು ರೈತರಿಗೆ ಶೇ.2 ಮತ್ತು ಶೇ.1ರ ಬಡ್ಡಿ ದರದಲ್ಲಿ ಸಾಲ ನೀಡುವ ಯೋಜನೆಯಡಿಯಲ್ಲಿ ಕಳೆದ 3 ವರ್ಷಗಳಿಂದ ಇಲ್ಲಿಯವರೆವಿಗೆ ಎಷ್ಟು ಜನರಿಗೆ ಅನುಕೂಲ ಮಾಡಿಕೊಟ್ಟಿದೆ; ಈ ಯೋಜನೆಯಡಿಯಲ್ಲಿ ನೀಡಲಾಗುವ ಗರಿಷ್ಠ ಮೊತ್ತದ ಸಾಲವೆಷ್ಟು?